# ಕರ್ನಾಟಕ ಲೋಕಾಯುಕ್ತ

ಸಂ.ಕಂಪ್ಲೆಂಟ್/ಉಪಲೋಕ್/ಬಿಡಿ-2646/2015/ಡಿಆರ್‌ಇ-1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 28/03/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

ವಿಷಯ: ಶ್ರೀ.ಬಸವರಾಜ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯಿತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಹೆಚ್.ವಿ.ಬಸವರೆಡ್ಡಿ ಬಿನ್ ಹೆಚ್.ವೀರಣ್ಣ, ಬೇಡರೆಡ್ಡಿಹಳ್ಳಿ ಅಂಚೆ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ.ಬಸವರಾಜ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯಿತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ದೂರುದಾರರು ತಮ್ಮ ದೂರಿನಲ್ಲಿ ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕ ದಾರಿಗೆ ಬೇಲಿ ಹಾಕಿ ಕುಡಿಯುವ ನೀರನ್ನು ನಲ್ಲಿಯಿಂದ ತರಲು ತೊಂದರೆ ಕೊಡುತ್ತಿದ್ದು, ತನಗೆ ಕುಡಿಯಲು ನೀರು ಬಿಡದೆ ತನ್ನ ಮನೆ ಮುಂದೆ ಬೇಲಿ ಹಾಕಿ ತನಗೆ ತೊಂದರೆ ಕೊಡುತ್ತಿದ್ದಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ

3) ದೂರುದಾರರ ದೂರಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಕಳುಹಿಸಿದ ನೋಟೀಸು ಜಾರಿಯಾದರೂ ಸಹ ಮತ್ತು ದೂರವಾಣಿ ಮುಖಾಂತರ ವಿಚಾರ ತಿಳಿಸಿದ್ದರೂ ಸಹ ಎದುರುದಾರರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ.

4) ದೂರುದಾರರ ದೂರನ್ನು ಪರಿಶೀಲಿಸಿದಾಗ, ದೂರುದಾರರು ಕುಡಿಯುವ ನೀರನ್ನು ಪಡೆಯಲು ಹೋಗುವ ಸಾರ್ವಜನಿಕ ದಾರಿಗೆ ಬೇಲಿ ಹಾಕಿ ಎದುರುದಾರರು ತೊಂದರೆ ಕೊಡುತ್ತಿದ್ದಾರೆಂದು ಆಪಾದನೆಯಿದ್ದು, ಸದರಿ ಆಪಾದನೆಯನ್ನು ಅಲ್ಲಗಳೆಯಲು ಎದುರುದಾರರು ಯಾವುದೇ ಆಕ್ಷೇಪಣೆಯನ್ನಾಗಲೀ ಅಥವಾ ಸಾಕ್ಷ್ಯಾಧಾರಗಳನ್ನಾಗಲೀ ಒದಗಿಸಿರುವುದಿಲ್ಲ. ನೋಟೀಸು ಜಾರಿಯಾದರೂ ಸಹ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸದೆ ಇದ್ದು, ಆ ಕಾರಣದಿಂದ ದೂರುದಾರರ ದೂರನ್ನು ಅಲ್ಲಗಳೆಯಲು ಯಾವುದೇ ಆಧಾರವಿಲ್ಲ ಮತ್ತು ಎದುರುದಾರರ ವಿರುದ್ಧ

ಪ್ರತಿಕೂಲ ನಿರ್ಣಯವನ್ನು ಕೈಗೊಳ್ಳಬೇಕಾಗುತ್ತದೆ. ಎದುರುದಾರರು ಸಾರ್ವಜನಿಕ ದಾರಿಗೆ ತಡೆಯುಂಟುಮಾಡಿ ದೂರುದಾರರಿಗೆ ತೊಂದರೆಯನ್ನುಂಟು ಮಾಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ

5) ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡಾಗ, ಕುಡಿಯುವ ನೀರನ್ನು ಪಡೆಯಲು ಹೋಗುವ ಸಾರ್ವಜನಿಕ ದಾರಿಗೆ ಹಾಕಿರುವ ಬೇಲಿಯನ್ನು ತೆರವುಗೊಳಿಸುವುದು ಅವಶ್ಯವಾಗಿರುತ್ತದೆ.

6) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಕ್ಷಮ ಪ್ರಾಧಿಕಾರಕ್ಕೆ ದೂರುದಾರರಿಗೆ ಆಗಿರುವ ತೊಂದರೆಯನ್ನು ಸರಿಪಡಿಸಲು ಸಂಬಂಧಪಟ್ಟ ಇಲಾಖೆಗೆ ನಿರ್ದೇಶನ ನೀಡುವಂತೆ ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ **ಒಂದು ತಿಂಗಳೊಳಗೆ** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

28/3/17.

**(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)**
**ಉಪಲೋಕಾಯುಕ್ತರು-2,**
**ಕರ್ನಾಟಕ ರಾಜ್ಯ, ಬೆಂಗಳೂರು.**